ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 701

ಸದಸ್ಯರ ಹೆಸರು : ಶ್ರೀ ಸುನೀಲ್ ಗೌಡ ಬಸನಗೌಡ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರಿಸುವ ದಿನಾಂಕ : 17–12–2021.

ಉತ್ತರಿಸುವವರು : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು.

ಕ್ರ.ಸಂ	ಪ್ರಶ್ನೆ	ಉತ್ತರ
(ಅ)	ಗ್ರಾಮ ಪಂಚಾಯಿತಿಗಳಲ್ಲಿ ಕೆಲಸ ಮಾಡುತ್ತಿರುವ ಗ್ರಾಮ ಪಂಚಾಯಿತಿ ಸಿಬ್ಬಂದಿಗಳ ವೇತನವು ಪ್ರತಿ ತಿಂಗಳು ದೊರೆಯದೆತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಪರಿಹರಿಸಲು ಸರ್ಕಾರ ಕೈಗೊಂಡ ಕ್ರಮಗಳೇನು;	ಬಂದಿದೆ. ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 113 ರಂತೆ ಗ್ರಾಮ ಪಂಚಾಯತಿಯ ಸಿಬ್ಬಂದಿಗಳ ವೇತನವನ್ನು ಗ್ರಾಮ ಪಂಚಾಯತಿ ನಿಧಿಯಿಂದ ಅಂದರೆ ಸ್ವಂತ ಸಂಪನ್ಮೂಲದಿಂದ ಪಾವತಿಸುವುದು, ಪ್ರತಿಯೊಂದು ಗ್ರಾಮ ಪಂಚಾಯತಿಯ ಕರ್ತವ್ಯವಾಗಿರುತ್ತದೆ. ಆದರೂ ರಾಜ್ಯದ ಹಲವಾರು ಗ್ರಾಮ ಪಂಚಾಯತಿಗಳಲ್ಲಿ ಸಂಪನ್ಮೂಲದ ಕೊರತೆಯಿಂದ ಸಮಯಕ್ಕೆ ಸರಿಯಾಗಿ ಸಿಬ್ಬಂದಿಗಳ ವೇತನ ಪಾವತಿಸದ ಕಾರಣ ಸರ್ಕಾರವು ಗ್ರಾಮ ಪಂಚಾಯತಿಗಳಿಗೆ ಬಿಡುಗಡೆ ಮಾಡುವ ಅನುದಾನದಲ್ಲಿ ಭಾಗಶಃ ವೇತನಕ್ಕಾಗಿ ಪ್ರತ್ಯೇಕ ಅನುದಾನವನ್ನು ಬಿಡುಗಡೆ ಮಾಡುತ್ತಿದೆ. ಪ್ರಸ್ತುತ ರಾಜ್ಯದ ಗ್ರಾಮ ಪಂಚಾಯತಿಗಳಲ್ಲಿ 1) ಬಿಲ್ ಕಲೆಕ್ಟರ್, 2) ಕ್ಲರ್ಕ್ ಕಂ ಡಾಟಾ ಎಂಟ್ರಿ ಆಪರೇಟರ್ / ಡಾಟಾ ಎಂಟ್ರಿ ಆಪರೇಟರ್, 3) ವಾಟರ್ ಆಪರೇಟರ್, 4) ಅಟೆಂಡೆಂಟ್ ಮತ್ತು 5) ಕ್ಲೀನರ್ಸ್ ಸೇರಿದಂತೆ ಸಿಬ್ಬಂದಿಗಳ ವೇತನಕ್ಕಾಗಿ ವಾರ್ಷಿಕವಾಗಿ ಒಟ್ಟು ರೂ.783.61 ಕೋಟಿ ಅನುದಾನದ ಅವಶ್ಯಕತೆ ಇದ್ದು, ಇದರಲ್ಲಿ ರೂ. 511.20 ಕೋಟಿಗಳನ್ನು ಸರ್ಕಾರದಿಂದ ತ್ರೈಮಾಸಿಕವಾಗಿ 4 ಕಂತುಗಳಲ್ಲಿ ಬಿಡುಗಡೆ ಮಾಡಲಾಗುತ್ತಿದೆ. ವೇತನಕ್ಕಾಗಿ ಕೊರತೆಯಾಗುವ ರೂ.272.41 ಕೋಟಿಗಳಲ್ಲಿ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯ ಕಾರ್ಯಕ್ರಮದ ಸೇವೆ ನೀಡುವವರಿಗೆ ಸದರಿ ಯೋಜನೆಯಡಿ ರೂ. 61.50 ಕೋಟಿಗಳನ್ನು ವಾರ್ಷಿಕವಾಗಿ 2 ಕಂತುಗಳಲ್ಲಿ ಬಿಡುಗಡೆ ಮಾಡಲಾಗುತ್ತದೆ. ಪ್ರಸ್ತುತ ಗ್ರಾಮ ಪಂಚಾಯತಿ ನೌಕರರ ವೇತನಕ್ಕಾಗಿ 2021–22ನೇ ಸಾಲಿನಲ್ಲಿ ರೂ. 383.40 ಕೋಟಿಗಳನ್ನು ಸರ್ಕಾರದಿಂದ ತ್ರೈಮಾಸಿಕವಾಗಿ 3 ಕಂತುಗಳಲ್ಲಿ ಬಿಡುಗಡೆ ಮಾಡಲಾಗಿದೆ.
(ಆ)	ಗ್ರಾಮ ಪಂಚಾಯತ್ ಸಿಬ್ಬಂದಿಗಳ ವೇತನವನ್ನು ಪ್ರತಿ ತಿಂಗಳು ಪಾವತಿಸುವ ಮತ್ತು ಇತರೆ ಬೇಡಿಕೆಗಳ ಕುರಿತು ಸರ್ಕಾರದ ಸ್ಪಷ್ಟ ನಿಲುವೇನು;	
(ಇ)	ಯಾವ ಕಾಲಮಿತಿಗೆ ಒಳಪಟ್ಟು ಗ್ರಾಮ ಪಂಚಾಯತ್ ಸಿಬ್ಬಂದಿಗಳ ಸಮಸ್ಯೆಗಳನ್ನು ಪರಿಹರಿಸಲಾಗುವುದು?	

		ಗ್ರಾಮ ಪಂಚಾಯಿತಿ ಕಾರ್ಯದರ್ಶಿ ಮತ್ತು ಗ್ರಾಮೀಣಾಭಿವೃದ್ಧಿ ಸಹಾಯಕ (ಗ್ರೇಡ್-2) ವೃಂದದ ಶೇಕಡಾ 75 ರಷ್ಟು ಹುದ್ದೆಗಳನ್ನು 3:2 ಅನುಪಾತದಲ್ಲಿ ಸೇವೆಯೊಳಗೆ ನೇರ ನೇಮಕಾತಿ ಮಾಡಲು ಅವಕಾಶವಿದ್ದು, ಸತತವಾಗಿ 6 ವರ್ಷಕ್ಕಿಂತ ಹೆಚ್ಚು ಸೇವೆ ಸಲ್ಲಿಸುತ್ತಿರುವ ಅದರಲ್ಲಿ ಮೊದಲನೇ ಮೂರು ಖಾಲಿ ಹುದ್ದೆಗಳನ್ನು ಬಿಲ್ ಕಲೆಕ್ಟರ್ ವೃಂದದ ನೌಕರರಿಂದ ಮತ್ತು ತದನಂತರದ ಎರಡು ಖಾಲಿ ಹುದ್ದೆಗಳನ್ನು ಅಕೌಂಟೆಟ್ / ಕ್ಲರ್ಕ್ / ಟೈಪಿಸ್ಟ್ / ಕ್ಲರ್ಕ್ ಕಂ ಡಾಟಾ ಎಂಟ್ರಿ ಆಪರೇಟ್ ವೃಂದದ ನೌಕರರಿಂದ ಆಯ್ಕೆ ಮಾಡಿ ನೇಮಕಾತಿ ಮಾಡಲು ಅವಕಾಶ ಕಲ್ಪಿಸಲಾಗಿದೆ. ದ್ವಿತೀಯ ದರ್ಜೆ ಲೆಕ್ಕ ಸಹಾಯಕ ವೃಂದದ ಶೇಕಡಾ 50ರಷ್ಟು ಹುದ್ದೆಗಳನ್ನು 1:1 ಅನುಪಾತದಲ್ಲಿ ಸೇವೆಯೊಳಗೆ ನೇರ ನೇಮಕಾತಿ ಮಾಡಲು ಅವಕಾಶವಿದ್ದು, ಸತತವಾಗಿ 6 ವರ್ಷಕ್ಕಿಂತ ಹೆಚ್ಚು ಸೇವೆ ಸಲ್ಲಿಸುತ್ತಿರುವ ಅದರಲ್ಲಿ ಮೊದಲನೇ ಖಾಲಿ ಹುದ್ದೆಯನ್ನು ಬಿಲ್ ಕಲೆಕ್ಟರ್ ವೃಂದದ ನೌಕರರಿಂದ ಮತ್ತು ಎರಡನೇ ಖಾಲಿ ಹುದ್ದೆಯನ್ನು ಅಕೌಂಟೆಟ್ / ಕ್ಲರ್ಕ್ / ಟೈಪಿಸ್ಟ್ / ಕ್ಲರ್ಕ್ ಕಂ ಡಾಟಾ ಎಂಟ್ರಿ ಆಪರೇಟ್ ವೃಂದದ ನೌಕರರಿಂದ ಆಯ್ಕೆ ಮಾಡಿ ನೇಮಕಾತಿ ಮಾಡಲು ಅವಕಾಶ ಕಲ್ಪಿಸಲಾಗಿದೆ.

ಸಂಖ್ಯೆ: ಗ್ರಾಅಪ 432 ಗ್ರಾಪಂಅ 2021

(ಕೆ.ಎಸ್. ಈಶ್ವರಪ್ಪ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು.

ಕೆ.ಎಸ್. ಈಶ್ವರಪ್ಪ
ಗ್ರಾಮೀಣಾಭಿವೃದ್ಧಿ ಮತ್ತು
ಪಂಚಾಯತ್ ರಾಜ್ ಸಚಿವರು